**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.989/2025.**

ಪಿರ್ಯಾದುದಾರರುಃ- ಗೋಪಾಲ ಚಂದ್ರು ಗೌಡ,
ವಯಸ್ಸು ಸುಮಾರು 36 ವರ್ಷ,
ವೃತ್ತಿಃ ರೈತ ವ ವ್ಯಾಪಾರ,
ಸಾಕೀನಃ ಹೊಂಡದಗದ್ದೆ, ಮಾವಿನಕುರ್ವಾ,
ತಾಲೂಕುಃ ಹೊನ್ನಾವರ, (ಉ.ಕ).

**-ವಿರುದ್ಧ-**

ಆರೋಪಿಯ ಹೆಸರುಃ- ಅಣ್ಣಪ್ಪ ನಾರಾಯಣ ಗೌಡ,
ಸಾಕೀನಃ ಮುಗುಳಿ, ಗುಣವಂತೆ,
ಪೋಸ್ಟಃ ಗುಣವಂತೆ,
ತಾಲೂಕುಃ- ಹೊನ್ನಾವರ, (ಉ.ಕ.).

**ಆಪಾದನೆ**

ಶ್ರೀ ಅನಿಲ್ ಜೋನ್ ಸಿಕ್ವೇರಾ., ಬಿ.ಬಿ.ಎ.,ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ಆರೋಪಿಯ ವಿರುದ್ಧ ಪಿರ್ಯಾದಿಯು ಮೂರು ಪ್ರಕರಣಗಳನ್ನು ಮಾನ್ಯ ಜೆ.ಎಮ್.ಎಫ್.ಸಿ ಹೊನ್ನಾವರ ನ್ಯಾಯಾಲಯದಲ್ಲಿ ದಾಖಲಿಸಿದ್ದು, ಷದ್ರಿ ಕ್ರಿಮಿನಲ್ ಪ್ರಕರಣಗಳ ಸಂಖ್ಯೆ 872/2023, 873/2023, 874/2023, ಆಗಿದ್ದು, ಷದ್ರಿ ಮೂರು ಪ್ರಕರಣಗಳನ್ನು ಆರೋಪಿ ಹಾಗೂ ಪಿರ್ಯಾದಿಯು ರಾಜಿ ಮಾಡಿಕೊಂಡಿದ್ದು, ರಾಜಿಯಂತೆ ರೂ.2,00,000/- ಗಳನ್ನು ಪಿರ್ಯಾದಿಗೆ ಸಂದಾಯ ಮಾಡಲು ಒಪ್ಪಿದ್ದು, ರಾಜಿ ಮೊತ್ತದ ಪೈಕಿ ರೂ.50,000/- ಗಳನ್ನು ಪಿರ್ಯಾದಿಗೆ ಸಂದಾಯ ಮಾಡಿದ್ದು, ಬಾಕಿ ಇರುವ ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ಆರೋಪಿಯಾದ ನೀವು ಪಿರ್ಯಾದಿಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಗುಣವಂತೆ** ಶಾಖೆಯ ಚೆಕ್ ನಂ.764653 ನ್ನು ದಿನಾಂಕ 10-01-2025 ರಂದು ರೂ. 1,50,000/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಖಾತೆಯಿರುವ

**ಕೆ.ಡಿ.ಸಿ.ಸಿ.ಬ್ಯಾಂಕ್ ಲಿ., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Account Blocked' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 18-03-2025 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 02-04-2025 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ 09-04-2025 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು

ಪ್ರಶ್ನೆ 2: ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

ಸಹಿ ಇದೆ/-

**ದಿನಾಂಕಃ- 18-09-2025.**

**(ಅನಿಲ್ ಜೋನ್ ಸಿಕ್ವೇರಾ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಯವರ ನ್ಯಾಯಾಲಯ.,ಹೊನ್ನಾವರ.**

ಆರೋಪಿಯ ಸಹಿಃ- ಸಹಿ ಇದೆ

****